ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2015-16ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ 2012-13ನೇ ಸಾಲಿಗೆ ಸಂಬಂಧಿಸಿದಂತೆ ಸಾಮಾನ್ಯ ವರ್ಗದಡಿ ಬಿಡುಗಡೆ ಮಾಡಿದ ಕೇಂದ್ರ ಸಹಾಯಧನವನ್ನು 2014-15ನೇ ಸಾಲಿನಲ್ಲಿ ಬಾಕಿ ಇರುವ ಘಟಕಗಳಿಗೆ ಕೇಂದ್ರ ಸಹಾಯಧನ ಬಿಡುಗಡೆ ಕುರಿತು

ಓದಲಾಗಿದೆ :

1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 5-40/2012-BG ದಿನಾಂಕ 08.12.2014
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 52 ಜೈಅಯೋ 2015, ದಿನಾಂಕ 31.07.2015

**ಪ್ರಸ್ತಾವನೆ :**

ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, **2015-16ನೇ** ಸಾಲಿನ ರಾಜ್ಯ ಆಯವ್ಯಯದಡಿ **ರೂ.1256.00** ಲಕ್ಷಗಳನ್ನು ಕೇಂದ್ರ ಹಾಗೂ ರಾಜ್ಯ ಪಾಲಾಗಿ ಜಿಲ್ಲಾ ವಲಯದಡಿ ಹಂಚಿಕೆ ಮಾಡಿದ್ದು, ಮೇಲೆ **(2)ರಲ್ಲಿ ಓದಲಾದಂತೆ** ಕೇಂದ್ರ ಸರ್ಕಾರವು **2012-13ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಸಾಮಾನ್ಯ ವರ್ಗದಡಿ **ರೂ.193.87 ಲಕ್ಷಗಳ** ಪೈಕಿ **ರೂ.9.73** ಲಕ್ಷಗಳನ್ನು ಬಾಗಲಕೋಟೆ ಮತ್ತು ಹಾಸನ ಜಿಲ್ಲೆಗಳಿಗೆ ಕೇಂದ್ರ ಸಹಾಯಧನ ಮಾಡಿದ್ದು, ಇನ್ನುಳಿದ ಕೇಂದ್ರ ಸಹಾಯಧನ **ರೂ.184.141 ಲಕ್ಷಗಳನ್ನು 2014-15ನೇ** ಸಾಲಿನಲ್ಲಿ ಸಾಧಿಸಿದ ಜೈವಾನಿಲ ಸ್ಥಾವರಗಳ ಪ್ರಗತಿಗನುಗುಣವಾಗಿ ಕೇಂದ್ರ ಸಹಾಯಧನ ಬಾಕಿ ಪಾವತಿಗಾಗಿ ಬಾಗಲಕೋಟೆ, ಬೆಂಗಳೂರು(ಗ್ರಾ), ಬೆಳಗಾಂ, ಬಿಜಾಪುರ, ಚಿಕ್ಕಬಳ್ಳಾಪುರ, ದಕ್ಷಿಣ ಕನ್ನಡ, ದಾವಣಗೆರೆ, ಹಾವೇರಿ, ಕೋಲಾರ, ರಾಮನಗರ ಮತ್ತು ಉಡುಪಿ ಸೇರಿದಂತೆ **10 ಜಿಲ್ಲೆಗಳಿಗೆ 2015-16ನೇ** ಸಾಲಿನ ಆಯವ್ಯಯದ **ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)ರಡಿ** ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ/52/ಜೈಅಯೋ/2015(1) ಬೆಂಗಳೂರು, ದಿನಾಂಕ 11.08.2015**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **2015-16ನೇ** ಸಾಲಿನಲ್ಲಿ ಕೇಂದ್ರ ಸರ್ಕಾರವು **2012-13ನೇ ಸಾಲಿಗೆ ಸಂಬಂಧಿಸಿದಂತೆ** ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಸಾಮಾನ್ಯ ವರ್ಗದಡಿ ಬಿಡುಗಡೆ ಮಾಡಿದ ಕೇಂದ್ರ ಸಹಾಯಧನದಲ್ಲಿ ಬಾಕಿ ಇರುವ ಜಿಲ್ಲೆಗಳಿಗೆ ಬಿಡುಗಡೆ ಮಾಡಿ ಇನ್ನುಳಿದ ಕೇಂದ್ರ ಸಹಾಯಧನ **ರೂ.184.141 ಲಕ್ಷ** (ಒಂದುನೂರ ಎಂಬತ್ನಾಲ್ಕು ಲಕ್ಷದ ಹದಿನಾಲ್ಕು ಸಾವಿರದ ಒಂದು ರೂಪಾಯಿಗಳು ಮಾತ್ರ)ಗಳನ್ನು **2015-16ನೇ** ಸಾಲಿನ ಆಯವ್ಯಯದಡಿ **2014-15ನೇ** ಸಾಲಿನಲ್ಲಿ ಅನಿಲ ಸ್ಥಾವರಗಳಿಗೆ ಬಾಕಿ ಇರುವ ಕೇಂದ್ರ ಸಹಾಯಧನವನ್ನು ಕೆಳಕಂಡ **10** ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ.ಸಂ | ಜಿಲ್ಲಾ ಪಂಚಾಯತ್ | ಬಿಡುಗಡೆ ಮಾಡಿದ ಅನುದಾನ(ರೂ.ಲಕ್ಷಗಳಲ್ಲಿ) |
|---|---|---|
| 1 | ಬಾಗಲಕೋಟೆ | 0.880 |
| 2 | ಬೆಂಗಳೂರು (ಗ್ರಾ) | 10.020 |
| 3 | ಬೆಳಗಾಂ | 66.400 |
| 4 | ಬಿಜಾಪುರ | 14.230 |
| 5 | ಚಿಕ್ಕಬಳ್ಳಾಪುರ | 9.300 |
| 6 | ದಕ್ಷಿಣ ಕನ್ನಡ | 25.200 |
| 7 | ದಾವಣಗೆರೆ | 20.660 |
| 8 | ಹಾವೇರಿ | 11.400 |
| 9 | ರಾಮನಗರ | 11.550 |
| 10 | ಉಡುಪಿ | 14.501 |
| | ಒಟ್ಟು | 184.141 |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಕಾರ್ಯಕ್ರಮದ ಮಾರ್ಗಸೂಚಿಗಳನ್ವಯ ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡಬಾರದು ಹಾಗೂ **"ಗಾಂಧಿ ಸಾಕ್ಷಿ ಕಾಯಕ"** ತತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಬೇಕು ಎಂಬ ಷರತ್ತಿಗೊಳಪಟ್ಟು ಈ ಅನುದಾನ ಬಿಡುಗಡೆ ಮಾಡಿದೆ.

ಸದರಿ ಅನುದಾನವನ್ನು **ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)**ರಡಿ ವೆಚ್ಚ ಭರಿಸಿ, ಈ ಅನುದಾನ ಬಳಕೆ ಮಾಡಿಕೊಂಡಿರುವ ಫಲಾನುಭವಿಗಳ ವಿವರಗಳನ್ನು ಹಾಗೂ ನಿಗದಿತ ನಮೂನೆಗಳಲ್ಲಿ ಸಿ.ಎರವರಿಂದ ಆಡಿಟ್ ಮಾಡಿಸಿ ಹಣಬಳಕೆ ಪ್ರಮಾಣ ಪತ್ರವನ್ನು ನೀಡುವುದು.

**ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ : ಗ್ರಾಅಪ/429 /ಪಿಬಿಎಸ್/2015 ದಿನಾಂಕ 21.07.2015 ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರೆ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಂಗಳೂರು(ಗ್ರಾ), ಬೆಳಗಾಂ, ಬಿಜಾಪುರ, ಚಿಕ್ಕಬಳ್ಳಾಪುರ, ದಕ್ಷಿಣ ಕನ್ನಡ, ದಾವಣಗೆರೆ, ಹಾವೇರಿ, ಕೋಲಾರ, ರಾಮನಗರ ಮತ್ತು ಉಡುಪಿ
3. ಉಪಕಾರ್ಯದರ್ಶಿ (ಅಭಿವೃದ್ಧಿ) / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಂಗಳೂರು(ಗ್ರಾ), ಬೆಳಗಾಂ, ಬಿಜಾಪುರ, ಚಿಕ್ಕಬಳ್ಳಾಪುರ, ದಕ್ಷಿಣ ಕನ್ನಡ, ದಾವಣಗೆರೆ, ಹಾವೇರಿ, ಕೋಲಾರ, ರಾಮನಗರ ಮತ್ತು ಉಡುಪಿ
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5. ಜಿಲ್ಲಾ ಖಜಾನಾಧಿಕಾರಿಗಳು, ಬಾಗಲಕೋಟೆ, ಬೆಂಗಳೂರು(ಗ್ರಾ), ಬೆಳಗಾಂ, ಬಿಜಾಪುರ, ಚಿಕ್ಕಬಳ್ಳಾಪುರ, ದಕ್ಷಿಣ ಕನ್ನಡ, ದಾವಣಗೆರೆ, ಹಾವೇರಿ, ಕೋಲಾರ, ರಾಮನಗರ ಮತ್ತು ಉಡುಪಿ
6. ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಖಜಾನೆಗಳ ನಿರ್ದೇಶಕರು, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
8. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖವಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.